ಕರ್ನಾಟಕ ಸರ್ಕಾರ
ಕನ್ನಡ ಮತ್ತು ಸಂಸ್ಕೃತಿ ಇಲಾಖೆ
ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು – 560 002
ದೂರವಾಣಿ: 080-22213530/22275540 ಫ್ಯಾಕ್ಸ್: 080-22214379 ಇ-ಮೇಲ್: kanbhavblr@gmail.com ವೆಬ್ ಸೈಟ್ : www.kannadasiri.co.in

ಸಂಖ್ಯೆ: ಡಿಕೆಸಿ-12028/18/2021 (ಭಾಗ-1)

ದಿನಾಂಕ: 25.10.2021

ಆಯುಕ್ತರು,
ಕಾಲೇಜು ಶಿಕ್ಷಣ ಇಲಾಖೆ,
ಉನ್ನತ ಶಿಕ್ಷಣ ಸೌಧ,
ಶೇಷಾದ್ರಿ ರಸ್ತೆ,
ಬೆಂಗಳೂರು.

25/10/2021

ಮಾನ್ಯರೆ,

ವಿಷಯ : 2021ನೇ ಸಾಲಿನ ಕರ್ನಾಟಕ ರಾಜ್ಯೋತ್ಸವದ ನಿಮಿತ್ತ 'ಕನ್ನಡಕ್ಕಾಗಿ ನಾವು' ಅಭಿಯಾನ ಕಾರ್ಯಕ್ರಮಕ್ಕೆ ಪ್ರಾಯೋಜನೆ ಕೋರಿರುವ ಕುರಿತು.

* * * * *

ಮಾನ್ಯ ಇಂಧನ, ಕನ್ನಡ ಮತ್ತು ಸಂಸ್ಕೃತಿ ಇಲಾಖಾ ಸಚಿವರು 2021ರ ಕರ್ನಾಟಕ ರಾಜ್ಯೋತ್ಸವ ಆಚರಣೆಯನ್ನು ವಿಶೇಷವಾಗಿ ಆಚರಿಸಲು ಸಭೆಗಳನ್ನು ನಡೆಸಿ, ರಾಜ್ಯೋತ್ಸವದ ನಿಮಿತ್ತ ಹಮ್ಮಿಕೊಳ್ಳಬೇಕಾದ ಕಾರ್ಯಕ್ರಮಗಳ ಬಗ್ಗೆ ತಿಳಿಸಿರುತ್ತಾರೆ. ಅವುಗಳಲ್ಲಿ ಕರ್ನಾಟಕದ ಗಡಿಪ್ರದೇಶಗಳನ್ನೂ ಒಳಗೊಂಡಂತೆ ಎಲ್ಲಾ ಜಿಲ್ಲೆ ಮತ್ತು ತಾಲ್ಲೂಕುಗಳಲ್ಲಿ ಸಂಗೀತ, ನೃತ್ಯ, ನಾಟಕ ಮುಂತಾದ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಏರ್ಪಡಿಸುವುದು; ಕನ್ನಡದ ಮೂರು ಹಾಡುಗಳನ್ನು ಏಕಕಾಲದಲ್ಲಿ ಹಾಡುವುದು; ಶುದ್ಧ ಕನ್ನಡದಲ್ಲಿ ಮಾತನಾಡುವ ಸ್ಪರ್ಧೆ; ಶುದ್ಧ ಕನ್ನಡದಲ್ಲಿ ಬರೆಯಲು ಮತ್ತು ಮಾತನಾಡಲು ಪ್ರೇರೇಪಿಸುವುದು; ಪುಸ್ತಕ ಮೇಳ, ದೇಶೀಯ ಉಡುಪು ಮತ್ತು ಆಹಾರ ಮೇಳ, ಚಿತ್ರಕಲೆ ಮತ್ತು ಶಿಲ್ಪಕಲಾಕೃತಿಗಳ ಪ್ರದರ್ಶನಗಳೊಂದಿಗೆ ಮೂರು ದಿನಗಳ ಕಾಲ ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದಲ್ಲಿ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ದಿನವಿಡೀ ಏರ್ಪಡಿಸುವುದು.

ಈ ನಿಟ್ಟಿನಲ್ಲಿ ರಾಜ್ಯಾದ್ಯಂತ ಕರ್ನಾಟಕ ರಾಜ್ಯೋತ್ಸವದ ನಿಮಿತ್ತ ಹಮ್ಮಿಕೊಳ್ಳಲಾಗಿರುವ 'ಕನ್ನಡಕ್ಕಾಗಿ ನಾವು-ಅಭಿಯಾನ'ದ ಅಂಗವಾಗಿ ದಿನಾಂಕ: 29.10.2021, 30.10.2021 ಹಾಗೂ 31.10.2021 ರಂದು 3 ದಿನಗಳ ಕಾಲ ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದಲ್ಲಿ 'ಕರ್ನಾಟಕ ಸಾಂಸ್ಕೃತಿಕ ಉತ್ಸವ'ದ ನಿಮಿತ್ತ ಬೆಳಗ್ಗೆ 9.00 ಗಂಟೆಯಿಂದ ರಾತ್ರಿ 9.00 ಗಂಟೆಯವರೆಗೆ ಪುಸ್ತಕ ಪ್ರದರ್ಶನ, ಶಿಲ್ಪಕಲೆ/ಚಿತ್ರಕಲೆ ಪ್ರದರ್ಶನ, ಸ್ಥಳೀಯ ಉಡುಗೆ-ತೊಡುಗೆ ಮತ್ತು ಆಹಾರ ಮೇಳಗಳನ್ನು ಹಮ್ಮಿಕೊಳ್ಳಲಾಗಿದೆ. ನಾಡಿನ ಶ್ರೀಮಂತ ಜನಪದ ಸಂಸ್ಕೃತಿಯನ್ನು ಪ್ರತಿಬಿಂಬಿಸುವ ಎಲ್ಲಾ ಕಲಾಪ್ರಕಾರಗಳನ್ನೂ ಒಂದೇ ವೇದಿಕೆಯಲ್ಲಿ ಆಯೋಜಿಸಲಾಗಿದೆ. ಈ ಎಲ್ಲಾ ಕಲಾಪ್ರಕಾರಗಳ ಪ್ರದರ್ಶನಗಳು ಕಾಲೇಜು ವಿದ್ಯಾರ್ಥಿಗಳಿಗೆ ಸಾಹಿತ್ಯಾಭಿರುಚಿ, ವಾಚನಾಭಿರುಚಿ ಹಾಗೂ ಕನ್ನಡ ನಾಡಿನ ಶ್ರೀಮಂತ ಸಂಸ್ಕೃತಿಯ ಪರಿಚಯ ಮತ್ತು ಅವುಗಳತ್ತ ಒಲವನ್ನು ಬೆಳೆಸಲು ಅತ್ಯಂತ ಅನುಕೂಲಕರವಾಗಿವೆ.

ಆದ್ದರಿಂದ ಬೆಂಗಳೂರಿನಲ್ಲಿರುವ ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಖಾಸಗಿ ಉನ್ನತ ಶಿಕ್ಷಣ ಸಂಸ್ಥೆಗಳ, ಕಾಲೇಜುಗಳ ಮತ್ತು ವಿಶ್ವವಿದ್ಯಾನಿಲಯದ ವಿದ್ಯಾರ್ಥಿಗಳು ಹಾಗೂ ಎನ್.ಸಿ.ಸಿ. ಮತ್ತು ಎನ್.ಎಸ್.ಎಸ್. ವಿದ್ಯಾರ್ಥಿಗಳನ್ನು ಕರ್ನಾಟಕ ಸಾಂಸ್ಕೃತಿಕ ಉತ್ಸವದ ಮೂರು ದಿನವೂ ರವೀಂದ್ರ ಕಲಾಕ್ಷೇತ್ರಕ್ಕೆ ಕಳುಹಿಸಿಕೊಡಲು ಕೋರಿದೆ. ಈ ವಿಚಾರವಾಗಿ ಒಟ್ಟು 12

ಗಂಟೆಗಳ ನಿರಂತರ ಕಾರ್ಯಕ್ರಮಗಳ ಪ್ರದರ್ಶನ ಇರುವುದರಿಂದ ಕಾಲೇಜು ವಿದ್ಯಾರ್ಥಿಗಳನ್ನು ತಂಡಗಳನ್ನಾಗಿ (ಪ್ರತಿ ತಂಡದಲ್ಲೂ 250 ರಿಂದ 300 ವಿದ್ಯಾರ್ಥಿಗಳಿರುವಂತೆ) ವಿಂಗಡಿಸಿ, ಪ್ರತಿ ದಿನ 3 ವಿಭಾಗಗಳಲ್ಲಿ ಕಳುಹಿಸಿಕೊಡಲು ಕೋರಿದೆ. ಯಾವ ಯಾವ ದಿನಾಂಕಗಳಲ್ಲಿ ಯಾವ ಯಾವ ತಂಡಗಳಲ್ಲಿ ಯಾವ ಯಾವ ಕಾಲೇಜುಗಳ ಎಷ್ಟೆಷ್ಟು ವಿದ್ಯಾರ್ಥಿಗಳನ್ನು ಕಳುಹಿಸುತ್ತೀರಿ ಎಂಬ ಬಗ್ಗೆ ಮಾಹಿತಿ ನೀಡಲು ಕೋರಿದೆ. ಬಂದ ವಿದ್ಯಾರ್ಥಿಗಳಿಗೆ ಕಾಲಾನುಸಾರ ಉಪಾಹಾರ/ಊಟದ ವ್ಯವಸ್ಥೆ ಮಾಡಲಾಗುವುದು ಎಂಬ ವಿಷಯವನ್ನು ತಮಗೆ ತಿಳಿಸಲಾಗಿದೆ. ಈ ಕುರಿತು ಇಲಾಖೆಯ ನೋಡಲ್ ಅಧಿಕಾರಿಗಳಾದ ಶ್ರೀ ನಾಗರಾಜ್, ಪತ್ರಾಂಕಿತ ವ್ಯವಸ್ಥಾಪಕರು, ಸಂಪರ್ಕ ಸಂಖ್ಯೆ: 97403 97918 ಅನ್ನು ಸಂಪರ್ಕಿಸಲು ಕೋರಿದೆ.

ತಮ್ಮ ವಿಶ್ವಾಸಿ, 25/10/2021

ನಿರ್ದೇಶಕರು
ಕನ್ನಡ ಮತ್ತು ಸಂಸ್ಕೃತಿ ಇಲಾಖೆ
ಬೆಂಗಳೂರು

ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ
ಕನ್ನಡ ಕಾಯಕ ವರ್ಷ 2021-22

ಸಂಖ್ಯೆ:ಕಾಶಿಇ/ಶೈವಿ/10/ಸುತ್ತೋಲೆ/2021-22

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ.
ಉನ್ನತ ಶಿಕ್ಷಣ ಸೌಧ. ಶೇಷಾದ್ರಿ ರಸ್ತೆ.
ಬೆಂಗಳೂರು. ದಿನಾಂಕ:25.10.2021

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು ಇವರ ಮೇಲ್ಕಂಡ ಪತ್ರದ ಸಂಖ್ಯೆ: ಡಿಕೆಶಿ-12028/18/2021(ಭಾಗ-1) ದಿನಾಂಕ: 25.10.2021 ರ ಪತ್ರವನ್ನು ಈ ಕೆಳಕಂಡವರ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ ಪರಿಚಲಿಸಲಾಗಿದೆ.

ಕಾಲೇಜು ಶಿಕ್ಷಣ ನಿರ್ದೇಶಕರು

ಇವರಿಗೆ

1. ಇಲಾಖಾ ವ್ಯಾಪ್ತಿಯ ಎಲ್ಲಾ ಪ್ರಾಂಶುಪಾಲರುಗಳು, ಸರ್ಕಾರಿ ಮತ್ತು ಖಾಸಗಿ ಅನುದಾನಿತ ಪದವಿ ಕಾಲೇಜುಗಳು- ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.

ಪ್ರತಿಯನ್ನು :

1. ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಮಂಗಳೂರು, ಶಿವಮೊಗ್ಗ, ಧಾರವಾಡ ಮತ್ತು ಕಲಬುರಗಿ ಇವರಿಗೆ ತಮ್ಮ ವ್ಯಾಪ್ತಿಗೊಳಪಡುವ ಎಲ್ಲಾ ಕಾಲೇಜುಗಳಿಗೆ ಸುತ್ತೋಲೆ ಹೊರಡಿಸಿ ಅಗತ್ಯ ಕ್ರಮಕೈಗೊಳ್ಳುವಂತೆ ಸೂಚಿಸಲಾಗಿದೆ.
2. ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು ಇವರಿಗೆ ಮಾಹಿತಿಗಾಗಿ.
3. ಮಾಹಿತಿ ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು - ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
4. ಕಛೇರಿ ಪ್ರತಿ.